# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ | 458 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನೀಲ್ ವಲ್ಯಾಪುರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 07.12.2023 |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಅಬಕಾರಿ ಇಲಾಖೆಯಿಂದ ಬರುವ ವರಮಾನಕ್ಕೆ ನಿಗಧಿಪಡಿಸಲಾದ ಗುರಿ ಎಷ್ಟು; ಮತ್ತು ಸರ್ಕಾರಕ್ಕೆ ಬಂದಿರುವ ವರಮಾನ ಎಷ್ಟು; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)</td><td>ಅಬಕಾರಿ ಇಲಾಖೆಯು ಕಳೆದ ಐದು ವರ್ಷಗಳಲ್ಲಿ ಸಂಗ್ರಹಿಸಿದ ಅಬಕಾರಿ ರಾಜಸ್ವದ ವಿವರಗಳು ಕೆಳಕಂಡಂತಿದೆ.<br>(ರೂ.ಕೋಟಿಗಳಲ್ಲಿ)
<table>
<tr><th>ಕ್ರ ಸಂ.</th><th>ವರ್ಷ</th><th>ನಿಗಧಿಪಡಿಸಲಾದ ಗುರಿ</th><th>ಸಂಗ್ರಹಿಸಲಾದ ಅಬಕಾರಿ ರಾಜಸ್ವ</th><th>ಶೇಕಡವಾರು ಬೆಳವಣಿಗೆ (ಹಿಂದಿನ ವರ್ಷಕ್ಕೆ ಹೋಲಿಸಿದಲ್ಲಿ)</th></tr>
<tr><td>1.</td><td>2018–19</td><td>19,750</td><td>19,943.93</td><td>11.12</td></tr>
<tr><td>2.</td><td>2019–20</td><td>20,950</td><td>21,583.95</td><td>8.22</td></tr>
<tr><td>3.</td><td>2020–21</td><td>22,700</td><td>23,332.10</td><td>8.10</td></tr>
<tr><td>4.</td><td>2021–22</td><td>24,580</td><td>26,377.68</td><td>13.05</td></tr>
<tr><td rowspan="2">5.</td><td rowspan="2">2022–23</td><td>29,000</td><td rowspan="2">29,920.37</td><td rowspan="2">13.43</td></tr>
<tr><td>32,000 (ಪರಿಷ್ಕೃತ)</td></tr>
</table></td></tr>
<tr><td>ಆ)</td><td>ರಾಜ್ಯದಲ್ಲಿ ಎಷ್ಟು ವಿಧದ ಮದ್ಯದಂಗಡಿಗಳಿಗೆ ಪರವಾನಿಗೆಗಳನ್ನು ನೀಡಲಾಗುತ್ತಿದೆ; ಈ ಪರವಾನಿಗೆ ಪಡೆಯಲು ಇರುವ ಮಾನದಂಡಗಳೇನು;</td><td>1992ನೇ ಸಾಲಿನಿಂದ ಹೊಸದಾಗಿ ಸಿಎಲ್–2 ಹಾಗೂ ಸಿಎಲ್–9 ಸನ್ನದನ್ನು ನೀಡಲು ಸರ್ಕಾರ ನಿರ್ಬಂಧಿಸಿರುವುದರಿಂದ ಅಬಕಾರಿ ಇಲಾಖೆಯಿಂದ ಹೊಸದಾಗಿ ಸಿಎಲ್–2 ಮತ್ತು ಸಿಎಲ್–9 ಸನ್ನದುಗಳ ಮಂಜೂರಾತಿ ನೀಡಲಾಗುತ್ತಿಲ್ಲ.<br><br>ಪ್ರಸ್ತುತ ಸಿಎಲ್–4, ಸಿಎಲ್–6ಎ, ಸಿಎಲ್–7, ಸಿಎಲ್–8, ಸಿಎಲ್–7ಎ, ಸಿಎಲ್–11ಸಿ, ಫಾರ್ಮ್ ಸಿಎಲ್–16, ಫಾರ್ಮ್ ಸಿಎಲ್–17 ಮತ್ತು ಫಾರ್ಮ್ ಸಿಎಲ್–18 ಸನ್ನದುಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು,</td></tr>
</table>

| | | |
|---|---|---|
| | | ಸಂಖ್ಯೆ:10243/2017ರಲ್ಲಿನ ದಿನಾಂಕ:11.07.2017ರ ಆದೇಶದಲ್ಲಿ ನೀಡಿದ ಸ್ಪಷ್ಟೀಕರಣದಂತೆ, ಮಹಾನಗರ ಪಾಲಿಕೆ, ನಗರ ಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹಾದು ಹೋಗುವ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿರುವ ಸನ್ನದುಗಳನ್ನು ನಿಯಮಾನುಸಾರ ನವೀಕರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಸರ್ಕಾರದ ಪತ್ರ ಸಂಖ್ಯೆ: ಆಇ 36 ಇಡಬ್ಲ್ಯೂಪಿ 2018, ದಿನಾಂಕ: 06.08.2020ರಲ್ಲಿ 2011ರ ಜನಗಣತಿಯನ್ವಯ 5000 ಅಥವಾ ಅದಕ್ಕಿಂತ ಹೆಚ್ಚು ಜನಸಂಖ್ಯೆಯುಳ್ಳ ಗ್ರಾಮ ಪಂಚಾಯಿತಿ/ಸ್ಥಳೀಯ ಪ್ರದೇಶಗಳ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಹೊಸದಾಗಿ ಸಿಎಲ್–6ಎ ಮತ್ತು ಸಿಎಲ್–7 ಸನ್ನದುಗಳಿಗೆ ಮಾತ್ರ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ (5)ರಡಿಯಲ್ಲಿ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿಬಂಧನೆಗಳನ್ನು ಹೊರತುಪಡಿಸಿ, ಇತರೆ ಷರತ್ತುಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ನಿಯಮಾನುಸಾರ ಪ್ರಾರಂಭಿಸಲು ವಿನಾಯಿತಿಯನ್ನು ನೀಡಲಾಗಿದೆ.<br><br>ಸರ್ಕಾರದ ಪತ್ರ ಸಂಖ್ಯೆ:ಆಇ 33 ಇಎಫ್‌ಎಲ್ 2021, ದಿನಾಂಕ:19.01.2022ರಲ್ಲಿ ಸರ್ಕಾರದ ರಾಜಸ್ವ ಹಿತದೃಷ್ಠಿಯಿಂದ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಹೊಸದಾಗಿ ಮಂಜೂರು ಮಾಡುವ ಸಿಎಲ್–7(ಎ) ಸನ್ನದುಗಳಿಗೆ (ಸರ್ಕಾರದ ಸಂಸ್ಥೆಗಳಾದ ಐ.ಟಿ.ಡಿ.ಸಿ ಮತ್ತು ಕೆ.ಎಸ್.ಡಿ.ಟಿ.ಸಿ) ಅನುಮತಿಯನ್ನು ನೀಡಲಾಗಿದೆ.<br><br>ಸರ್ಕಾರದ ಪತ್ರ ಸಂಖ್ಯೆ: ಆಇ 07 ಇಎಫ್‌ಎಲ್ 2008, ದಿನಾಂಕ: 03.07.2009 ರಲ್ಲಿ ರಾಜ್ಯದ ಪ್ರತಿ ತಾಲ್ಲೂಕಿಗೆ ಕನಿಷ್ಟ 2 ಸನ್ನದುಗಳಂತೆ 352 ಸನ್ನದುಗಳು, ಜಿಲ್ಲಾ ಕೇಂದ್ರಸ್ಥಾನಕ್ಕೆ 2 ರಂತೆ 58 ಸನ್ನದುಗಳು ಹಾಗೂ ಎಂಎಸ್‌ಐಎಲ್ ಸಂಸ್ಥೆ ಪ್ರಾದೇಶಿಕ ಬೇಡಿಕೆ ಅಧ್ಯಯನ ಆಧರಿಸಿ ಕೋರಿಕೆ ಸಲ್ಲಿಸುವ ಸ್ಥಳಗಳಿಗೆ 53 ಸನ್ನದುಗಳಂತೆ ಒಟ್ಟು 463 ಸನ್ನದುಗಳನ್ನು ಹಂಚಿಕೆ ಮಾಡಲಾಗಿದೆ. |

| | | |
|---|---|---|
| ಈ) | ಬಾರ್ ಮತ್ತು ವೈನ್ ಶಾಪ್ ಮಾಲೀಕರು ಮನಬಂದಂತೆ ಮದ್ಯದ ದರ ಹೆಚ್ಚಿಗೆ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; ಯಾವ ಯಾವ ವರ್ಗದ ಪರವಾನಿಗೆಗಳಿಗೆ ಗರಿಷ್ಠ ಮಾರಾಟ ದರದ ಮೇಲೆ ಎಷ್ಟು ಪ್ರತಿಶತಃ ದರ ಹೆಚ್ಚಳ ಮಾಡಲು ಸರ್ಕಾರದ ನಿಯಮಾವಳಿಯಲ್ಲಿ ಅವಕಾಶವಿದೆ?<br>(ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | ಸಿಎಲ್–2 (ಚಿಲ್ಲರೆ ಮದ್ಯ ಮಾರಾಟ ಸನ್ನದು) ಹಾಗೂ ಸಿಎಲ್–11ಸಿ (ಎಂಎಸ್ಐಎಲ್) ಸನ್ನದುಗಳಲ್ಲಿ ಗ್ರಾಹಕರಿಗೆ ಮದ್ಯದ MRP ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br><br>ಸನ್ನದು ಷರತ್ತನ್ನು ಉಲ್ಲಂಘಿಸಿರುವ ಸನ್ನದುದಾರರ ವಿರುದ್ಧ ಕಳೆದ 03 ವರ್ಷಗಳಲ್ಲಿ ರಾಜ್ಯಾದ್ಯಂತ ಒಟ್ಟು 6207 ಪ್ರಕರಣಗಳನ್ನು ಕರ್ನಾಟಕ ಅಬಕಾರಿ ಕಾಯ್ದೆ, 1965ರ ಕಲಂ 36 ರನ್ವಯ ದಾಖಲಿಸಿದ್ದು, 6206 ಪ್ರಕರಣಗಳನ್ನು ಸೂಕ್ತ ದಂಡವಿಧಿಸಿ ಇತ್ಯರ್ಥಗೊಳಿಸಿ ರೂ.10.66 ಕೋಟಿಯನ್ನು ದಂಡದ ರೂಪದಲ್ಲಿ ವಸೂಲಿಸಲಾಗಿರುತ್ತದೆ. ಈ ಪೈಕಿ 118 ಸನ್ನದುಗಳನ್ನು ಅಮಾನತ್ತುಗೊಳಿಸಲಾಗಿರುತ್ತದೆ. ಜಿಲ್ಲಾವಾರು ಹಾಗೂ ವರ್ಷವಾರು ಮಾಹಿತಿಯನ್ನು **ಅನುಬಂಧ–2ರಲ್ಲಿ** ಇರಿಸಿದೆ.<br><br>ಸಿಎಲ್–2 (ಚಿಲ್ಲರೆ ಮದ್ಯ ಮಾರಾಟ ಸನ್ನದು) ಹಾಗೂ ಸಿಎಲ್–11ಸಿ (ಎಂಎಸ್ಐಎಲ್) ಸನ್ನದುಗಳನ್ನು ಹೊರತುಪಡಿಸಿ ಉಳಿದ ಇತರೆ ಸನ್ನದುಗಳಲ್ಲಿ ಮದ್ಯವನ್ನು ಗರಿಷ್ಠ ಮಾರಾಟ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡಲು ನಿಯಮಗಳಲ್ಲಿ ಯಾವುದೇ ನಿರ್ಬಂಧವಿರುವುದಿಲ್ಲ. |

**ಆಇ 73 ಇಎಲ್ಕ್ಯೂ 2023**

(ಆರ್.ಬಿ.ತಿಮ್ಮಾಪುರ)

ಅಬಕಾರಿ ಸಚಿವರು.